# ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

("ವಿ ಟಿ ಯು ಅಧಿನಿಯಮ ೧೯೯೪" ರ ಅಡಿಯಲ್ಲಿ ಕರ್ನಾಟಕ ಸರ್ಕಾರದಿಂದ ಸ್ಥಾಪಿತವಾದ ರಾಜ್ಯ ವಿಶ್ವವಿದ್ಯಾಲಯ)

**Visvesvaraya Technological University**

(State University of Government of Karnataka Established as per the VTU Act, 1994)

ಡಾ. ಪ್ರಸಾದ ಬಿ. ರಾಂಪುರೆ ಎಮ್.ಇ., ಪಿಹೆಚ್.ಡಿ.
ಕುಲಸಚಿವರು

ದೂರವಾಣಿ ಸಂ: (0831) – 2498100
ಫ್ಯಾಕ್ಸ್ ಸಂ : (0831) – 2405467


ಉಲ್ಲೇಖ ಸಂ.: ವಿತಾವಿ/ಪಿಎಸ್/2026-27/೨೧೮ ದಿನಾಂಕ: - 8 OCT 2026

## ಸುತ್ತೋಲೆ

ವಿಷಯ: ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ವತಿಯಿಂದ KPSC, KEA ಹಾಗೂ ಇತರ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಆನ್‌ಲೈನ್ ತರಬೇತಿ ಯೋಜನೆಯನ್ನು ಪ್ರಚುರ ಪಡಿಸುವ ಕುರಿತು.

ಉಲ್ಲೇಖ: ಸರ್ಕಾರದ ಉಪ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಇಡಿ 106 ಅಅವಿ 2026, ದಿನಾಂಕ 22.09.2026

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಲೋಕಸೇವಾ ಆಯೋಗ (KPSC), ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ಹಾಗೂ ಇತರ ಆಯ್ಕೆ ಪ್ರಾಧಿಕಾರಿಗಳ ವತಿಯಿಂದ ನಡೆಸಲಾಗುವ GP, FDA, SDA, PDO, PSI, Teachers ಸೇರಿದಂತೆ ಇತರ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸಲು ಅಭ್ಯರ್ಥಿಗಳಿಗೆ ಅನುಕೂಲವಾಗುವಂತೆ ಮಾನ್ಯಮುಖ್ಯಮಂತ್ರಿಯವರ 100 ದಿನಗಳ ಯೋಜನೆಯಡಿ "ಮುಖ್ಯಮಂತ್ರಿಯವರ ವಿದ್ಯಾರ್ಥಿ ಸಹಾಯ ಹಸ್ತ ಯೋಜನೆ" ರಾಜ್ಯದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಇಲಾಖೆಯ ವತಿಯಿಂದ ಉಚಿತವಾಗಿ ಆನ್‌ಲೈನ್ ಮೂಲಕ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವ ಸಂಬಂಧ ಆನ್‌ಲೈನ್ ಅರ್ಜಿ ಕರೆಯಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮಾಧ್ಯಮ ಪ್ರಕಟಣೆಯ ಪ್ರತಿಯನ್ನು ಲಗತ್ತಿಸಲಾಗಿದೆ.

ಮುಂದುವರೆದು, ತಾವು ದಯವಿಟ್ಟು ಸದರಿ ಸುತ್ತೋಲೆಯ ವಿಷಯವನ್ನು ತಮ್ಮ ಮಹಾವಿದ್ಯಾಲಯದ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ, ಹಳೆ ವಿದ್ಯಾರ್ಥಿಗಳ ಸಂಘ (Alumni Associations) ಗಳಿಗೆ ಹಾಗೂ ಮಹಾವಿದ್ಯಾಲಯದ ಎಲ್ಲಾ ಸಾಮಾಜಿಕ ಮಾಧ್ಯಮ ಜಾಲತಾಣಗಳಲ್ಲಿ (You Tube, Facebook, Whatsapp ಇತ್ಯಾದಿ) ಪ್ರಚುರಪಡಿಸುವಂತೆ ಈ ಮೂಲಕ ಸೂಚಿಸಲಾಗಿದೆ.

ಅಡಕ: ಮೇಲಿನಂತೆ

Raul 08/10/26

ಕುಲಸಚಿವರು

ಇವರಿಗೆ,

1) ಪ್ರಾಚಾರ್ಯರು, ವಿ.ತಾ.ವಿ.ಯ ಘಟಕ, ಎಲ್ಲ ಸಂಯೋಜನಹೊಂದಿದ ಹಾಗೂ ಸ್ವಾಯತ್ತ ತಾಂತ್ರಿಕ ಮಹಾವಿದ್ಯಾಲಯಗಳು ಹಾಗೂ ಸ್ಕೂಲ್ ಆಫ್ ಆರ್ಕಿಟೆಕ್ಚರ್.
2) ಎಲ್ಲ ವಿಭಾಗಗಳ ಚೇರ್‌ಪರಸನ್ಸ್/ಪ್ರೋಗ್ರಾಮ್ ಕೋರ್ಡಿನೇಟರ್ ಸ್ನಾತಕೋತ್ತರ ಕೇಂದ್ರ, ವಿ.ತಾ.ವಿ, ಮುದ್ದೇನಹಳ್ಳಿ, ಬೆಳಗಾವಿ, ಕಲಬುರಗಿ ಮತ್ತು ಮೈಸೂರು.

ಪ್ರತಿ ಇವರಿಗೆ,

1. ಮಾನ್ಯ ಕುಲಪತಿಗಳು, ವಿ.ತಾ.ವಿ., ಬೆಳಗಾವಿ ಇವರಿಗೆ, ಅವರ ಕಾರ್ಯದರ್ಶಿಗಳ ಮುಖಾಂತರ.
2. ಪ್ರಾದೇಶಿಕ ನಿರ್ದೇಶಕರು (ಪ್ರಭಾರಿ), ವಿ.ತಾ.ವಿ.ಯ ಬೆಂಗಳೂರು, ಬೆಳಗಾವಿ, ಕಲಬುರಗಿ ಹಾಗೂ ಮೈಸೂರು ಪ್ರಾದೇಶಿಕ ಕೇಂದ್ರಗಳು.

# MEDIA RELEASE

Golden Opportunity for Competitive Examination Aspirants: Free Online Coaching under the **Chief Minister's Vidyarthi Sahaaya Hasta Scheme.**

The Department of Higher Education, Government of Karnataka, is providing free online coaching for competitive examinations conducted by KPSC, KEA and other selection authorities under the Chief Minister's Vidyarthi Sahaaya Hasta Scheme. The training is being provided by **India for IAS Coaching Centre**, **Bangalore.**

Free coaching is available for various examinations, including Gazetted Probationers, Assistant Professors, AC, SAAD, FDA, SDA, PDO, VAO, Group C, PSI and PC, among others. Candidates can avail free coaching for any three examinations of their choice.

The Seva Sindhu Portal has now been changed to the Seva One Portal. Candidates can apply for registration through the Seva One Portal at https://sevaone.karnataka.gov.in.

For any issues related to the application, candidates may contact the Seva One Helpline at 080-24410574, from Monday to Saturday, between 10:00 AM and 6:00 PM, except on government holidays. Candidates are informed make use of this opportunity.

# ಮಾಧ್ಯಮ ಪ್ರಕಟಣೆ

ಸ್ಪರ್ಧಾತ್ಮಕ ಪರೀಕ್ಷಾ ಆಕಾಂಕ್ಷಿಗಳಿಗೆ ಸುವರ್ಣಾವಕಾಶ: ಮುಖ್ಯಮಂತ್ರಿಗಳ ವಿದ್ಯಾರ್ಥಿ ಸಹಾಯ ಹಸ್ತ ಯೋಜನೆಯಡಿ ಉಚಿತ ಆನ್‌ಲೈನ್ ತರಬೇತಿ.

ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ವತಿಯಿಂದ **ಮುಖ್ಯಮಂತ್ರಿಗಳ ವಿದ್ಯಾರ್ಥಿ ಸಹಾಯ ಹಸ್ತ ಯೋಜನೆ**ಯಡಿ, KPSC, KEA ಹಾಗೂ ಇತರ ಆಯ್ಕೆ ಪ್ರಾಧಿಕಾರಗಳು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಆನ್‌ಲೈನ್ ತರಬೇತಿ ನೀಡಲಾಗುತ್ತಿದೆ. ಈ ತರಬೇತಿಯನ್ನು **ಇಂಡಿಯಾ ಫಾರ್ ಐಎಎಸ್, ಬೆಂಗಳೂರು** ಸಂಸ್ಥೆಯ ಮೂಲಕ ನೀಡಲಾಗುತ್ತಿದೆ.

Gazetted Probationers, Assistant Professors, AC SAAD, FDA, SDA, PDO, VAO, Group C, PSI ಮತ್ತು PC ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ಲಭ್ಯವಿದ್ದು, ಅಭ್ಯರ್ಥಿಗಳು ತಮಗೆ ಇಷ್ಟವಾದ ಯಾವುದೇ 3 ಪರೀಕ್ಷೆಗಳಿಗೆ ಉಚಿತ ತರಬೇತಿ ಪಡೆಯಬಹುದಾಗಿದೆ.

ಸೇವಾ ಸಿಂಧು ಪೋರ್ಟಲ್ ಅನ್ನು ಈಗ ಸೇವಾ ವನ್ ಪೋರ್ಟಲ್ ಆಗಿ ಬದಲಾಯಿಸಲಾಗಿದ್ದು, ಅಭ್ಯರ್ಥಿಗಳು ನೋಂದಣಿಗಾಗಿ https://sevaone.karnataka.gov.in ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿಗೆ ಸಂಬಂಧಿಸಿದ ಯಾವುದೇ ಸಮಸ್ಯೆಗಳಿಗೆ ಸೇವಾ ವನ್ ಸಹಾಯವಾಣಿ ಸಂಖ್ಯೆ 080-24410574 ಅನ್ನು ಸರ್ಕಾರಿ ರಜಾದಿನಗಳನ್ನು ಹೊರತುಪಡಿಸಿ ಸೋಮವಾರದಿಂದ ಶನಿವಾರದವರೆಗೆ ಬೆಳಿಗ್ಗೆ 10:00 ರಿಂದ ಸಂಜೆ 6:00 ರವರೆಗೆ ಸಂಪರ್ಕಿಸಬಹುದಾಗಿದೆ. ಅಭ್ಯರ್ಥಿಗಳು ಈ ಸುವರ್ಣಾವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಕೋರಲಾಗಿದೆ.